ಎ-72-(20)

**ವಿಧಾನ ಪರಿಷತ್ ಸದಸ್ಯರಾದ ಶ್ರೀ ಮರಿತಿಬ್ಬೇಗೌಡ ರವರು ನಿಯಮ 72ರಡಿಯಲ್ಲಿ ಮಂಡಿಸಿರುವ ಗಮನ ಸೆಳೆಯುವ ಸೂಚನಾ ಪತ್ರಕ್ಕೆ ಉತ್ತರ**

**ವಿಷಯ**

1986 ರಿಂದ 1995 ರವರೆಗೆ ಪ್ರಾರಂಭವಾಗಿರುವ ಅನುದಾನ ರಹಿತ ಶಾಲಾ ಕಾಲೇಜುಗಳ ಬೋಧಕ/ಬೋಧಕೇತರರಿಗೆ ನೀಡಲಾಗುತ್ತಿರುವ ವೇತನಾನುದಾನ ಸಂಬಂಧ ಸರ್ಕಾರದ ಹಂತಕ್ಕೆ ಬಂದಿರುವ ಕಡತಗಳಿಗೆ ಅನುಮೋದನೆ ನೀಡದಿರುವುದರಿಂದ ಉಂಟಾಗಿರುವ ಗಂಭೀರ ಸಮಸ್ಯೆ ಬಗ್ಗೆ ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರ ಗಮನ ಸೆಳೆಯ ಬಯಸುತ್ತೇನೆ.

**ಉತ್ತರ**

ದಿನಾಂಕ :14.01.2020ರಂದು ವಿವಿಧ ಕನ್ನಡ ಮಾಧ್ಯಮ ಶಾಲಾ ವ್ಯವಸ್ಥಾಪಕ ಮಂಡಳಿಗಳ ಪ್ರತಿನಿಧಿಗಳ ಜೊತೆ ನಡೆದ ಸಭೆಯಲ್ಲಿ 1995ರ ನಂತರದಲ್ಲಿ ಪ್ರಾರಂಭವಾದ ಖಾಸಗಿ ಅನುದಾನ ರಹಿತ ಕನ್ನಡ ಮಾಧ್ಯಮ ಶಾಲಾ ಕಾಲೇಜುಗಳಿಗೆ ಸಹಾಯಾನುದಾನಕ್ಕೆ ಒಳಪಡಿಸುವ ಕುರಿತಂತೆ ಚರ್ಚಿಸಲಾಗಿದೆ. 1995 ರಿಂದ 2018ರವರೆಗೆ ಸಂಬಂಧಿಸಿದಂತೆ ಪ್ರತಿ 5 ವರ್ಷದ ಬ್ಲಾಕ್ ಅವಧಿಗೆ ಒಟ್ಟು ಕನ್ನಡ ಮಾಧ್ಯಮ ಶಾಲಾ ಕಾಲೇಜುಗಳ ಸಂಖ್ಯೆಯನ್ನು ಅವುಗಳ ಹೆಸರಿನೊಂದಿಗೆ ಮತ್ತು ಒಟ್ಟು ಶಿಕ್ಷಕರುಗಳ ಸಂಖ್ಯೆಯನ್ನು ಹಾಗೂ ಅಂದಾಜು ವೆಚ್ಚದ ಮಾಹಿತಿಯನ್ನು ನೀಡಿದ್ದಲ್ಲಿ ಈ ಬೇಡಿಕೆಯ ಕುರಿತಂತೆ ನಿರ್ಣಯಿಸಲು ಸಾಧ್ಯವಾಗುತ್ತದೆ ಎಂದು ಮನಗಂಡು, ಪ್ರತಿ 5 ವರ್ಷಕ್ಕೆ ಸೀಮಿತಗೊಳಿಸಿ ಮಾಹಿತಿಯನ್ನು ಕ್ರೂಢೀಕರಿಸಲು ನಿರ್ಧರಿಸಿದ್ದು, ಅದರಂತೆ ಕ್ರೂಢೀಕೃತ ಮಾಹಿತಿಯನ್ನು ಪಡೆಯಲು ಕ್ರಮಕೈಗೊಳ್ಳಲಾಗಿದೆ.

ಇಡಿ 117 ಪಿಎಂಸಿ 2020

[ಎಸ್.ಸುರೇಶ್ ಕುಮಾರ್]
**ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು.**